## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ. ಹೆಚ್. ವಿ. ಶಿವರುದ್ರಯ್ಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕೊಡಿಗೆನಹಳ್ಳಿ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ D.O.No. Compt/Uplok/BD/6916/2014/ARLO-2, ದಿನಾಂಕ: 18/22.02.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 03.02.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1. ಶ್ರೀ. ಹನುಮಂತರಾಯಪ್ಪ ಬಿ.ಎಸ್. ಕೊಡಿಗೆನಹಳ್ಳಿ ಗ್ರಾಮದ ನಿವಾಸಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ; ತಮ್ಮ ದೂರಿನಲ್ಲಿ (1) ಶ್ರೀ. ಹೆಚ್. ವಿ. ಶಿವರುದ್ರಯ್ಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕೊಡಿಗೆನಹಳ್ಳಿ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ರವರ ವಿರುದ್ಧ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. ದೂರಿನ ಸಂಕ್ಷಿಪ್ತ ವಿವರಣೆ :–

ದೂರುದಾರರು ತಮ್ಮ ದೂರಿನಲ್ಲಿ ಮಧುಗಿರಿ ತಾಲ್ಲೂಕು, ಕೊಡಿಗೇನಹಳ್ಳಿ ಗ್ರಾಮದ ಸರ್ವೆ ನಂ. 124/6 ರಲ್ಲಿ ನಿವೇಶನ ಸಂ.7 ಮತ್ತು 8 ದೂರುದಾರರ ಹೆಂಡತಿ ಶ್ರೀಮತಿ. ಮಾಲತಿ. ಎಸ್. ಗಂಡ ಹೆಚ್. ರಾಯಪ್ಪ ಎಂಬುವವರ ಹೆಸರಿನಲ್ಲಿ ಖಾತೆಯಾಗಿದ್ದು, ಎದುರುದಾರರು ಡಿ.ಸಿ.ಬಿ. ರಿಜಿಸ್ಟರ್ ಮತ್ತು ಗಣಕಯಂತ್ರದಲ್ಲಿ ಈ ಖಾತೆಯನ್ನು ಮಾಲತಿ ಗಂಡ ರಾಮಪ್ಪ ಅಂತ ಸೃಷ್ಟಿಸಿದ್ದು ಇರುತ್ತದೆ. ಪಡಿತರ ಚೀಟಿಗಾಗಿ ತಾವು ಅರ್ಜಿ ಸಲ್ಲಿಸಿದಾಗ ಸದರಿ ಅರ್ಜಿಯು ತಿರಸ್ಕೃತಗೊಂಡಿದ್ದು, ಈ ಬಗ್ಗೆ ಎದುರುದಾರರನ್ನು ವಿಚಾರಿಸಿದಾಗ ಕೈತಪ್ಪಿನಿಂದ ಆಗಿದ್ದು, ಸರಿಪಡಿಸಲು ದಾಖಲೆಗಳ ಅವಶ್ಯವಿದೆಯೆಂದು ದಾಖಲೆಗಲನ್ನು ಪಡೆದಿರುತ್ತಾರೆ. ಕೈತಪ್ಪಿನಿಂದ ಆಗಿದ್ದು, ಸರಿಪಡಿಸಲು ದಾಖಲೆಗಳ ಅವಶ್ಯವಿದೆಯೆಂದು ದಾಖಲೆಗಳನ್ನು ಪಡೆದಿರುತ್ತಾರೆ. ಆದರೆ ಇದುವರೆಗೆ ಖಾತೆ ಬದಲಾವಣೆ ಮಾಡಿರುವುದಿಲ್ಲ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ತಮಗೆ ನ್ಯಾಯ ದೊರಕಿಸಿಕೊಡಬೇಕೆಂದು ದೂರು ಸಲ್ಲಿಸಿದ್ದಾರೆ.

3. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಎಸ್. ಮಾಲತಿ ಗಂಡ ರಾಯಪ್ಪ ಎಂಬುವವರ ಹೆಸರಿನಲ್ಲಿ ಇರುವ ಖಾತೆಯನ್ನು 2010 ರಲ್ಲಿ ಪಂಚತಂತ್ರ ತಂತ್ರಾಂಶವನ್ನು ಇಲಾಖೆಯಿಂದ ಜಾರಿಗೆ ತಂದಿದ್ದು, ಸದರಿ ತಂತ್ರಾಂಶಕ್ಕೆ ಗ್ರಾಮಪಂಚಾಯತಿಯಲ್ಲಿರುವ ಎಲ್ಲಾ ಆಸ್ತಿಗಳ ವಿವರಗಳನ್ನು ದಾಖಲಿಸಬೇಕಾದ ಸಂದರ್ಭದಲ್ಲಿ ಗಣಕಯಂತ್ರ ನಿರ್ವಾಹಕರು ಕೈತಪ್ಪಿನಿಂದ ಎಸ್. ಮಾಲತಿ ಗಂಡ

ರಾಯಪ್ಪ ಬದಲಾಗಿ ಎಸ್. ಮಾಲತಿ ಗಂಡ ರಾಮಪ್ಪ ಎಂದು ತಪ್ಪಾಗಿ ನಮೂದಿಸಿರುತ್ತಾರೆ. ಆದ್ದರಿಂದ ಇದರಲ್ಲಿ ಯಾವುದೇ ಖೊಟ್ಟಿಯಾಗಲೀ ಅಥವಾ ಅಕ್ರಮವಾಗಲೀ ಜರುಗಿರುವುದಿಲ್ಲ. ದಿ. 14.6.2013 ರಿಂದ ಇ-ಸ್ವತ್ತು ತಂತ್ರಾಂಶವನ್ನು ಜಾರಿಗೆ ತಂದಿದ್ದು, ಹೆಸರನ್ನು ಬದಲಾಯಿಸುವುದನ್ನು ರದ್ದುಪಡಿಸಲಾಗಿರುತ್ತದೆ. ಇ-ತಂತ್ರಾಂಶದಲ್ಲಿ ಹೆಸರು ಬದಲಿಬೇಕಾದರೆ ಕ್ರಯಪತ್ರವಾದ ನಮತರ ಪ್ರಾಧಿಕಾರದ ನಕ್ಷೆ ಅನುಮೋದನೆಗೊಂಡ ಆದೇಶವನ್ನು ಅಳವಡಿಸಬೇಕಾದರೆ. ಇದಕ್ಕೆ ಡಿಜಿಟಲ್ ಸಹಿ ಮಾಡಬೇಕಾಗಿದ್ದು ಡ್ಯಾಂಗಲ್ ಅವಶ್ಯಕತೆಯಿದ್ದು, ಆದರೆ ಆ ಸಮಯದಲ್ಲಿ ಎದುರುದಾರರ ಡ್ಯಾಂಗಲ್ ರಿನೀವಲ್‌ಗೆ ಕಳುಹಿಸಲಾಗಿರುತ್ತದೆ. ಆನಂತರ ಎದುರುದಾರರು ಅಲ್ಲಿಂದ ವರ್ಗಾವಣೆ ಹೊಂದಿದ್ದ ಕಾರಣ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನಲ್ಲಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳು, ಮತ್ತು ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ದೂರುದಾರರು ತಮ್ಮದಲ್ಲದ ತಪ್ಪಿಗೆ ಪರಿತಪಿಸುವಂತಾಗಿದ್ದು ಕಂಡುಬರುತ್ತದೆ. ಏಕೆಂದರೆ ಎದುರುದಾರರ ಕಛೇರಿಯಲ್ಲಿ ತಂತ್ರಾಂಶದಲ್ಲಿ ಹೆಸರು ದಾಖಲಿಸುವಾಗ ಈ ರೀತಿ ತಪ್ಪಾಗಿದ್ದು, ಅದನ್ನು ಸರಿಪಡಿಸಿಕೊಡುವ ಕರ್ತವ್ಯ ಎದುರುದಾರರದ್ದಾಗಿರುತ್ತದೆ. ದೂರುದಾರರು ಹಾಜರುಪಡಿಸಿರುವ ದಾಖಲೆಗಳನ್ನು ಪರಿಶೀಲಿಸಲಾಗಿ, ಖಾತೆ ನಂ. 1280 ಇದು 2008-09 ರಲ್ಲಿ ಮಾಲತಿ ಗಂಡ ರಾಯಪ್ಪ ಅಂತ ಇದ್ದು, ಆನಂತರ ಅದು ಮಾಲತಿ ಗಂಡ ರಾಮಪ್ಪ ಎಂದು ಬದಲಾವಣೆಯಾಗಿರುವುದು ಕಂಡುಬರುತ್ತದೆ.

6. ಎದುರುದಾರರು ಕೇಳಿರುವ ದಾಖಲೆಗಳನ್ನು ದೂರುದಾರರು ನೀಡಿದರೂ ಸಹಾ ಬೇರೆಬೇರೆ ತಾಂತ್ರಿಕ ಕಾರಣಗಳನ್ನು ನೀಡಿ ದೂರುದಾರರಿಗೆ ನ್ಯಾಯದೊರಕದಿರುವುದು ಕಂಡುಬರುತ್ತದೆ. ಎದುರುದಾರರು ಈ ರೀತಿ ದಾಖಲೆಗಳಲ್ಲಿ ತಪ್ಪು ಕಂಡುಬಂದ ನಂತರವೂ ಅದೇ ಪಂಚಾಯತಿಯಲ್ಲಿ ಕೆಲಸ ನಿರ್ವಹಿಸಿದ್ದು, ಆದರೆ ದೂರುದಾರರ ಸಮಸ್ಯೆಯನ್ನು ಪರಿಹರಿಸದಿರುವುದು ಕಂಡುಬರುತ್ತದೆ. ಎದುರುದಾರರ ಕಛೇರಿಯ ಗಣಕಯಂತ್ರ ನಿರ್ವಾಹಕರು ತಪ್ಪು ಮಾಡಿದರೂ ಸಹಾ ಪಂಚಾಯತಿಯ ಮುಖ್ಯಸ್ಥರಾದ ಎದುರುದಾರರೇ ಅದಕ್ಕೆ ಜವಾಬ್ದಾರರಾಗಿರುತ್ತಾರೆ. ಆದ್ದರಿಂದ ಎದುರುದಾರರು ಕರ್ತವ್ಯಲೋಪವೆಸಗಿರುತ್ತಾರೆಂಬುದು ಮೇಲ್ನೋಟಕ್ಕೆ ಕಂಡುಬರುತ್ತದೆ.

7. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಹಾಗೂ 2ನೇ ಎದುರುದಾರರ ಆಕ್ಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ 2 ಮತ್ತು 3ನೇ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ / ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಈ ಹಿನ್ನೆಲೆಯಲ್ಲಿ ಶ್ರೀ. ಹೆಚ್. ವಿ. ಶಿವರುದ್ರಯ್ಯ, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ, (ಹಾಲಿ ನಿವೃತ್ತ) ಕೊಡಿಗೇನಹಳ್ಳಿ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ ಮತ್ತು ಸದರಿಯವರು ದಿನಾಂಕ: 30.11.2016 ರಂದು ನಿವೃತ್ತಿ ಹೊಂದಿರುವುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮ 214(2)(ಬಿ)(i) ರ ಅಡಿ ಇಲಾಖಾ ವಿಚಾರಣೆಗೆ ಅನುಮತಿಯನ್ನು ನೀಡಿ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ

ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/187/ಗ್ರಾಪಂಕಾ/2017 ಬೆಂಗಳೂರು, ದಿನಾಂಕ-03-04-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ. ಹೆಚ್. ವಿ. ಶಿವರುದ್ರಯ್ಯ, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ, (ಹಾಲಿ ನಿವೃತ್ತ) ಕೊಡಿಗೆನಹಳ್ಳಿ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ. ಹಾಗೂ ಸದರಿಯವರು ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮ 214(2)(ಬಿ) (i) ರಡಿಯಲ್ಲಿ ಸರ್ಕಾರವು ಮಂಜೂರಾತಿ ನೀಡಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
6. ಶ್ರೀ. ಹೆಚ್. ವಿ. ಶಿವರುದ್ರಯ್ಯ, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ, (ಹಾಲಿ ನಿವೃತ್ತ) ಕೊಡಿಗೆನಹಳ್ಳಿ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.